**Akashvani : Bangalore**
**Regional Bulletin In Kannada**
**10.05.2024 / 18.40 hrs**

ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

**10.05.2024 / 18.40 hrs**

**<><*<><>*><>**

ಮುಖ್ಯಾಂಶಗಳು

೧. ರಾಜ್ಯಾದ್ಯಂತ ಇಂದು ಜಗಜ್ಯೋತಿ ಬಸವಣ್ಣನವರ ಜಯಂತಿ ಆಚರಣೆ; ವಿವಿಧೆಡೆ ಸಾಂಸ್ಕೃತಿಕ ಕಾರ್ಯಕ್ರಮ

೨. ಪೊಲೀಸರ ಚೇತಾ ಬೈಕ್‌ಗೆ ಜಿಪಿಎಸ್ ಸೇರಿ ಆಧುನಿಕ ತಂತ್ರಜ್ಞಾನ ಅಳವಡಿಕೆ- ಬೆಂಗಳೂರು ಪೊಲೀಸ್ ಆಯುಕ್ತ ಬಿ.ದಯಾನಂದ್

೩. ಬರ-ಕುಡಿಯುವ ನೀರು ನಿರ್ವಹಣೆ ಕುರಿತು ಸಭೆ ನಡೆಸಲು ಮಾದರಿನೀತಿ ಸಂಹಿತೆ ವಿನಾಯಿತಿ ಕೋರಿ ಮುಖ್ಯ ಚುನಾವಣಾಧಿಕಾರಿಗಳಿಗೆ ಸಚಿವ ಪ್ರಿಯಾಂಕ್ ಖರ್ಗೆ ಪತ್ರ

೪. ಮತದಾನ ಪ್ರಮಾಣ ದಾಖಲೆ ಬಿಡುಗಡೆ ವಿಳಂಬದ ಕುರಿತು ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆಗೆ ಉತ್ತರ ನೀಡಿದ ಭಾರತೀಯ ಚುನಾವಣಾ ಆಯೋಗ

**<><*<><>*><>**

ಇಂದು ವಿಶ್ವಗುರು ಜಗಜ್ಯೋತಿ ಬಸವಣ್ಣನವರ ಜಯಂತಿ. ಇದರ ಅಂಗವಾಗಿ ರಾಜ್ಯಾದ್ಯಂತ ಜಯಂತ್ಯೋತ್ಸವವನ್ನು ಆಚರಿಸಲಾಗುತ್ತಿದೆ. ಬಸವ ಜಯಂತಿ ಅಂಗವಾಗಿ ಪ್ರಧಾನಿ ನರೇಂದ್ರಮೋದಿ, ಜಗದ್ಗುರು ಬಸವೇಶ್ವರರಿಗೆ ಗೌರವ ನಮನ ಸಲ್ಲಿಸಿದ್ದಾರೆ. ಬಸವೇಶ್ವರರ ತತ್ವಾದರ್ಶಗಳು ಕೋಟ್ಯಂತರ ಜನರ ಬದುಕಿನಲ್ಲಿ ಪ್ರಜ್ವಲಿಸಿವೆ ಎಂದು ಪ್ರಧಾನಿಯವರು ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಹೇಳಿದ್ದಾರೆ. ಬೆಂಗಳೂರಿನ ಬಸವೇಶ್ವರ ವೃತ್ತದಲ್ಲಿರುವ ಬಸವಣ್ಣನವರ ಪುತ್ಥಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮಾಲಾರ್ಪಣೆ ಮಾಡಿ ಗೌರವ ಸಲ್ಲಿಸಿದರು. ಜಯಂತಿ ಅಂಗವಾಗಿ ಮುಖ್ಯಮಂತ್ರಿಯವರು ಸಾಮಾಜಿಕ ಮಾಧ್ಯಮದಲ್ಲಿ ಕಾಯಕಯೋಗಿ ಬಸವಣ್ಣನವರು ಆದರ್ಶಪುರಷ ಗುರು, ದಾರ್ಶನಿಕ, ಮಹಾನ್ ಸಂತ, ಜ್ಞಾನಿ, ಸಾಮಾಜಿಕ ಕ್ರಾಂತಿಯ ಹರಿಕಾರ, ಶೋಷಣೆಯ ವಿರುದ್ಧದ ಹೋರಾಟಗಳಿಗೆ ಶಕ್ತಿಯಾಗಿದ್ದಾರೆ ಎಂದರು. ಜಾತಿ, ಧರ್ಮ, ಲಿಂಗಾಧಾರಿತ ಅಸಮಾನತೆ ಇಲ್ಲದ ಸರ್ವರಿಗೂ ಸಮಪಾಲು - ಸರ್ವರಿಗೂ ಸಮಬಾಳಿನ ಸಮತೆಯ ಸಮಾಜ

ನಿರ್ಮಾಣವಾಗಬೇಕೆಂಬ ಅವರ ಆಶಯ ತಮ್ಮದೂ ಆಗಿದೆ ಎಂದಿದ್ದಾರೆ. ಬಳಿಕ ಬೆಂಗಳೂರಿನ ಬಸವ ಭವನದಲ್ಲಿ ನಡೆದ ಕಾರ್ಯಕ್ರಮದಲ್ಲಿ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಶಿಕ್ಷಣ ತಜ್ಞ ಪ್ರಭಾಕರ್ ಕೋರೆ ಅವರಿಗೆ ಕಾಯಕ ರತ್ನ ಪ್ರಶಸ್ತಿ ಪ್ರದಾನ ಮಾಡಿದರು. ಈ ವೇಳೆ ಮಾತನಾಡಿದ ಅವರು, ಬಸವಣ್ಣನವರನ್ನು ಸಾಂಸ್ಕೃತಿಕ ನಾಯಕ ಎಂದು ತಮ್ಮ ಸರ್ಕಾರ ಘೋಷಿಸಿದ್ದು, ಅವರ ವಿಚಾರಗಳ ಕಡೆಗೆ ಜಗತ್ತು ತಿರುಗಿ ನೋಡುತ್ತಿದೆ. ಸರ್ವರಿಗೂ ಸಮಬಾಳು-ಸಮಪಾಲು ತತ್ವದೊಂದಿಗೆ ಬಸವಣ್ಣನವರ ಹಲವು ತತ್ವಗಳನ್ನು ಸರ್ಕಾರದ ಕಾರ್ಯಕ್ರಮಗಳಲ್ಲಿ ಅಳವಡಿಸಲಾಗಿದೆ ಎಂದರು. ಅನ್ನಭಾಗ್ಯ ಸೇರಿದಂತೆ ಪಂಚಖಾತ್ರಿ ಯೋಜನೆಗಳನ್ನು ಬಸವಣ್ಣನವರ ತತ್ವಗಳ ಆಧಾರದ ಮೇಲೆ ಜಾರಿಗೆ ತರಲಾಗಿದೆ. ಬಸವ ಕಲ್ಯಾಣ, ಬಸವನ ಬಾಗೇವಾಡಿ ಅಭಿವೃದ್ಧಿಗೆ ಪ್ರಾಧಿಕಾರ ಆರಂಭಿಸಿದ್ದೇವೆ ಎಂದು ಅವರು ಹೇಳಿದರು. ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಬೆಂಗಳೂರಿನಲ್ಲಿ ನಡೆದ ಕಾರ್ಯಕ್ರಮದಲ್ಲಿ ಬಸವಣ್ಣನವರಿಗೆ ಗೌರವ ಸಲ್ಲಿಸಿದರು. ಈ ವೇಳೆ ಅವರು ಮಾತನಾಡಿ, ಬಸವಣ್ಣನವರು ತುಳಿತಕ್ಕೆ ಒಳಗಾದ ಸಮಾಜಕ್ಕೆ ನ್ಯಾಯ ಕೊಡಿಸುವ ಆಶಯ ಹೊಂದಿದ್ದರು. ತಮ್ಮ ನಿಜ ಜೀವನದ ಅನುಭವಗಳನ್ನು ವಚನಗಳ ಮೂಲಕ ಸಮಾಜಕ್ಕೆ ಉತ್ತಮ ಸಂದೇಶಗಳನ್ನು ನೀಡಿದ್ದಾರೆ ಎಂದರು.

**<><*<><>*><>**

ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಜಗಜ್ಯೋತಿ ಬಸವಣ್ಣನವರ ಜಯಂತೋತ್ಸವವನ್ನು ಸರಳವಾಗಿ ಆಚರಿಸಲಾಯಿತು. ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಜಿಲ್ಲಾಡಳಿತ ವತಿಯಿಂದ ಕಾಯಕ ಯೋಗಿ, ಕರ್ನಾಟಕದ ಸಾಂಸ್ಕೃತಿಕ ನಾಯಕ ಬಸವಣ್ಣನವರ ಜಯಂತಿ ಹಾಗೂ ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ಜಯಂತಿ ಕಾರ್ಯಕ್ರಮವನ್ನು ಸರಳವಾಗಿ ಆಚರಿಸಲಾಯಿತು. ಅಪರ ಜಿಲ್ಲಾಧಿಕಾರಿ ಸಂಗಪ್ಪ, ಕಾಯಕಯೋಗಿ ಬಸವಣ್ಣನವರ ಹಾಗೂ ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಗೌರವ ನಮನ ಸಲ್ಲಿಸಿದರು. ಬಳಿಕ ಮಾತನಾಡಿದ ಅವರು, ಬಸವಣ್ಣನವರು ೧೨ನೇ ಶತಮಾನದಲ್ಲಿಯೇ ಸಾಮಾಜಿಕ ಕ್ರಾಂತಿಗೆ ಹೊಸ ಬಾಷ್ಯ ಬರೆದು, ವಚನಗಳ ಮೂಲಕ ಬದುಕಿನ ಮೌಲ್ಯಗಳನ್ನು ಸಾರಿದರು. ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ತಮ್ಮ ಕಾಯಕದ ಮೂಲಕ ಜನಾನುರಾಗಿಯಾಗಿ, ಮಹಿಳೆಯರಿಗೆ ಆದರ್ಶವಾಗಿದ್ದರು ಎಂದರು. ಕಲಬುರಗಿಯಲ್ಲಿ ಬಸವೇಶ್ವರ ದೇವಾಲಯ, ನಗರೇಶ್ವರ ದೇವಾಲಯಗಳಲ್ಲಿನ ಬಸವೇಶ್ವರರ ಮೂರ್ತಿಗೆ ವಿಶೇಷ ಅಲಂಕಾರ ಮಾಡಲಾಗಿತ್ತು. ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್, ಜಗತ್ ವೃತ್ತದಲ್ಲಿರುವ ಬಸವೇಶ್ವರರ ಭಾವಚಿತ್ರಕ್ಕೆ ನಮನ ಸಲ್ಲಿಸಿ ಪ್ರತಿಮೆಗೆ ಮಾಲಾರ್ಪಣೆ ಮಾಡಿ ಗೌರವ ಸೂಚಿಸಿದರು. ಚಿತ್ರದುರ್ಗ ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಆಯೋಜಿಸಲಾಗಿದ್ದ ನಾಡಿನ ಸಾಂಸ್ಕೃತಿಕ ನಾಯಕ

ಬಸವೇಶ್ವರ ಹಾಗೂ ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ಜಯಂತಿ ಕಾರ್ಯಕ್ರಮದಲ್ಲಿ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಪಾಲ್ಗೊಂಡು ಭಾವಚಿತ್ರಗಳಿಗೆ ಪುಷ್ಪ ನಮನ ಸಮರ್ಪಿಸಿದರು. ರಾಯಚೂರು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ನಗರಸಭೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ವತಿಯಿಂದ ಬಸವೇಶ್ವರ ಜಯಂತಿ ಸರಳ ರೀತಿಯಲ್ಲಿ ಆಚರಿಸಲಾಯಿತು. ಬಸವೇಶ್ವರ ಪುತ್ಥಳಿಗೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ರಾಹುಲ್ ತುಕಾರಾಮ ಪಾಂಡ್ವೆ ಹಾಗೂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ನಿಖಿಲ್.ಬಿ ಮಾಲಾರ್ಪಣೆ ಮಾಡಿದರು. ನಂತರ ಹೇಮರೆಡ್ಡಿ ಮಲ್ಲಮ್ಮ ಅವರ ಭಾವಚಿತ್ರಕ್ಕೆ ಮಾಲಾರ್ಪಣೆ ಮಾಡಿ ಪುಷ್ಪ ನಮನ ಸಲ್ಲಿಸಲಾಯಿತು. ಬಸವಣ್ಣ ಜಯಂತಿ ಅಂಗವಾಗಿ ಕೋಲಾರದ ಟಿ.ಚೆನ್ನಯ್ಯ ರಂಗಮಂದಿರದಲ್ಲಿ ಜಯಂತೋತ್ಸವ ಆಯೋಜಿಸಲಾಗಿತ್ತು. ಜಿಲ್ಲಾಧಿಕಾರಿ ಅಕ್ರಂ ಪಾಷಾ, ಬಸವಣ್ಣನವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿದರು. ವಿಜಯನಗರದಲ್ಲಿ ಬಸವ ಜಯಂತಿಯ ಆಚರಣೆಯನ್ನು ಜಿಲ್ಲಾಡಳಿತದ ವತಿಯಿಂದ ಹೊಸಪೇಟೆ ನಗರದ ಬಸವೇಶ್ವರ ವೃತ್ತದಲ್ಲಿ ಬಸವೇಶ್ವರರ ಪುತ್ಥಳಿಗೆ ಜಿಲ್ಲಾಧಿಕಾರಿಗಳಾದ ಎಂ.ಎಸ್.ದಿವಾಕರ್, ಮಾಲಾರ್ಪಣೆ ಮಾಡಿದರು. ಮಂಡ್ಯ ಜಿಲ್ಲಾಡಳಿತದ ವತಿಯಿಂದ ಬಸವಣ್ಣ ಮತ್ತು ಹೇಮರೆಡ್ಡಿ ಮಲ್ಲಮ್ಮ ದಿನಾಚರಣೆ ಕಾರ್ಯಕ್ರಮವನ್ನು ಸರಳ ಆಚರಿಸಲಾಯಿತು. ಬಸವಣ್ಣ ಹಾಗೂ ಹೇಮರೆಡ್ಡಿ ಮಲ್ಲಮ್ಮ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿದ ಬಳಿಕ ಮಾತನಾಡಿದ ಜಿಲ್ಲಾಧಿಕಾರಿ ಡಾ.ಕುಮಾರ, ಬಸವಣ್ಣನವರ ಆಧ್ಯಾತ್ಮಿಕ ಮೌಲ್ಯಗಳು ಹಾಗೂ ಚಿಂತನೆಗಳನ್ನು ಪ್ರತಿಯೊಬ್ಬರೂ ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದರು. ಚಿಕ್ಕಮಗಳೂರು ಜಿಲ್ಲೆಯಲ್ಲಿ ಬಸವತತ್ವ ಪೀಠದಲ್ಲಿ ನಡೆದ ಕಾರ್ಯಕ್ರಮದಲ್ಲಿ ಶಾಸಕ ಹೆಚ್.ಡಿ ತಮ್ಮಯ್ಯ ಪಾಲ್ಗೊಂಡು ಬಸವೇಶ್ವರ ಮೂರ್ತಿಗೆ ಪುಷ್ಪಾರ್ಚನೆ ಮಾಡಿದರು. ಜಿಲ್ಲಾ ಬಿ.ಜೆ.ಪಿ ಕಚೇರಿಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಮಾಜಿ ಸಚಿವ ಸಿ.ಟಿ.ರವಿ ಪಾಲ್ಗೊಂಡು ಬಸವಣ್ಣನವರ ಸಾಧನೆಗಳ ಮಾಹಿತಿ ಹಂಚಿಕೊಂಡರು. ಕೊಪ್ಪಳ ಜಿಲ್ಲೆಯಲ್ಲಿ ವಿಶ್ವಗುರು ಬಸವ ಜಯಂತಿ ಹಾಗೂ ಶಿವಶರಣೆ ಹೇಮರಡ್ಡಿ ಮಲ್ಲಮ್ಮ ಜಯಂತಿ ಅಂಗವಾಗಿ ಅವರ ಭಾವಚಿತ್ರಗಳಿಗೆ ಪುಷ್ಪ ನಮನ ಸಲ್ಲಿಸಲಾಯಿತು.

<><*<><>*><>

ಅಕ್ಷಯ ತೃತೀಯಾ ಅಂಗವಾಗಿ ಪ್ರಧಾನಿ ನರೇಂದ್ರಮೋದಿ ದೇಶದ ಜನತೆಗೆ ಶುಭ ಕೋರಿದ್ದಾರೆ. ಈ ಶುಭ ಸಂದರ್ಭವು ದಾನ ಮಾಡಲು ಜನರನ್ನು ಉತ್ತೇಜಿಸಲಿ, ಎಲ್ಲರ ಜೀವನದಲ್ಲಿ ಹೊಸ ಶಕ್ತಿ ಮತ್ತು ಚೈತನ್ಯವನ್ನು ತುಂಬಲಿ ಎಂದು ಪ್ರಧಾನಿಯವರು ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಹಾರೈಸಿದ್ದಾರೆ.

<><*<><>*><>

ಪೊಲೀಸರ ಗಸ್ತು ಕಾರ್ಯಾಚರಣೆಗೆ ಅನುಕೂಲವಾಗುವಂತೆ ಪೊಲೀಸ್ ಇಲಾಖೆ ಅವರು ಬಳಸುವ ಚೇತಾ ಬೈಕ್ ಮೊಬೈಲ್ ಡೇಟಾ ಟರ್ಮಿನಲ್ ಮತ್ತು ಜಿಪಿಎಸ್ ವ್ಯವಸ್ಥೆ ಅಳವಡಿಸಲು ನಿರ್ಧರಿಸಿದೆ. ಪಾರದರ್ಶಕತೆಯನ್ನು ಕಾಯ್ದುಕೊಳ್ಳುವುದುರ ಜೊತೆಗೆ ತ್ವರಿತ ಪ್ರತಿಕ್ರಿಯೆ ಸಮಯವನ್ನು ಸುಧಾರಿಸುವ ನಿಟ್ಟಿನಲ್ಲಿ ಪ್ರಸ್ತುತ ಅಸ್ತಿತ್ವದಲ್ಲಿರುವ ೩೬೩ ಚೇತಾ ಗಸ್ತು ದ್ವಿಚಕ್ರ ವಾಹನಗಳನ್ನು ನವೀಕರಿಸಲಾಗುತ್ತಿದೆ. ಈ ಕುರಿತು ಮಾಹಿತಿ ನೀಡಿರುವ ಬೆಂಗಳೂರು ನಗರ ಪೊಲೀಸ್ ಆಯುಕ್ತ ಬಿ.ದಯಾನಂದ್ ಪೊಲೀಸರು ವಾಹನಗಳಲ್ಲಿಯೇ ಮಾಹಿತಿಯನ್ನು ಪಡೆಯಲು ಹಾಗೂ ಪರಿಶೀಲನೆ ನಡೆಸಲು ಜಿಪಿಎಸ್, ಆಡಿಯೋ, ವೀಡಿಯೋ ರೆಕಾರ್ಡಿಂಗ್ ಮತ್ತು ವಿಡಿಯೋ ಕಾನ್ಫರೆನ್ಸ್ ಸೌಲಭ್ಯಗಳನ್ನು ಒದಗಿಸಲಾಗುತ್ತದೆ ಎಂದು ತಿಳಿಸಿದ್ದಾರೆ. ಈಗಾಗಲೇ ೨೪೧ ಹೊಯ್ಸಳ ವಾಹನಗಳಿಗೆ ಹಾಗೂ ೧೦೦ ಕೋಬ್ರಾ ಟ್ರಾಫಿಕ್ ದ್ವಿಚಕ್ರ ವಾಹನಗಳಲ್ಲಿ ಮೊಬೈಲ್ ಡೇಟಾ ಟರ್ಮಿನಲ್ ವ್ಯವಸ್ಥೆ ಅಳವಡಿಸಲಾಗಿದೆ ಎಂದು ಅವರು ಮಾಹಿತಿ ನೀಡಿದ್ದಾರೆ.

**<><*<><>*><>**

ಬರ ಹಾಗೂ ಕುಡಿಯು ನೀರು ನಿರ್ವಹಣೆ ಕುರಿತು ಸಭೆ ನಡೆಸಲು ಮಾದರಿನೀತಿ ಸಂಹಿತೆ ವಿನಾಯಿತಿ ಕೋರಿ ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಸಚಿವ ಪ್ರಿಯಾಂಕ್ ಖರ್ಗೆ ರಾಜ್ಯ ಮುಖ್ಯ ಚುನಾವಣಾಧಿಕಾರಿಗಳಿಗೆ ಪತ್ರ ಬರೆದಿದ್ದಾರೆ. ರಾಜ್ಯದಲ್ಲಿ ಈಗಾಗಲೇ ೨೩೬ ತಾಲೂಕುಗಳ ಪೈಕಿ ೨೨೩ ತಾಲೂಕುಗಳನ್ನು ಬರ ಪೀಡಿತ ತಾಲೂಕುಗಳೆಂದು ಘೋಷಿಸಲಾಗಿದ್ದು, ಎಲ್ಲ ತಾಳೂಕುಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಉಲ್ಬಣಗೊಂಡಿದೆ. ಈ ಹಿನ್ನೆಲೆ ಕುಡಿಯುವ ನೀರು ನಿರ್ವಹಣೆ ಕುರಿತು ಸಭೆ ನಡೆಸಲು ಮಾದರಿ ನೀತಿ ಸಂಹಿತಿಯಿಂದ ವಿನಾಯಿತಿ ನೀಡಬೇಕು ಎಂದು ಅವರು ಪತ್ರದಲ್ಲಿ ಉಲ್ಲೇಖಿಸಿದ್ದಾರೆ.

**<><*<><>*><>**

ಬೆಳಗಾವಿ ತೋಟಗಾರಿಕಾ ಇಲಾಖೆ ಹಾಗೂ ಜಿಲ್ಲಾಡಳಿತ ವತಿಯಿಂದ, ಮಾವು ಹಾಗೂ ವಿವಿಧ ಗುಣಮಟ್ಟದ ಒಣ ದ್ರಾಕ್ಷಿಯ ಪ್ರದರ್ಶನ ಮತ್ತು ಮಾರಾಟ ಮೇಳವನ್ನು ಇಂದಿನಿಂದ ಮೂರು ದಿನಗಳವರೆಗೆ ಬೆಳಗಾವಿ ನಗರದ ಹ್ಯೂಮ್ ಪಾರ್ಕ್ ನಲ್ಲಿ ಆಯೋಜಿಸಲಾಗಿದೆ. ಬೆಳಗಾವಿ ಜಿಲ್ಲಾ ಪಂಚಾಯತ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಶಿಂಧೆ ಪ್ರದರ್ಶನ ಉದ್ಘಾಟಿಸಿದರು. ಬೆಳಗಾವಿಯ ಮಾರಿಹಾಳ ಹಾಗೂ ಸುತ್ತಮುತ್ತಲು ಬೆಳೆಯುವ ರುಚಿಕರವಾದ ಬೆಳಗಾವಿ ಮಾವನ್ನು ಮಾರುಕಟ್ಟೆಗೆ ಪರಿಚಯಿಸುವುದು ಮೇಳದ ಉದ್ದೇಶವಾಗಿದೆ. ಜೊತೆಗೆ ಅಥಣಿ ತಾಲೂಕಿನಲ್ಲಿ ಸುಮಾರು ಆರುನೂರು ಹೆಕ್ಟೇರ್ ಪ್ರದೇಶದಲ್ಲಿ ಬೆಳೆಯುವ ಒಣ ದ್ರಾಕ್ಷಿಯ ಮಾರಾಟಕ್ಕೆ ವ್ಯವಸ್ಥೆ ಕಲ್ಪಿಸಲಾಗಿದೆ. ಬೆಳಗಾವಿ ಆಪುಸ್ ಮಾವು ಜೊತೆಗೆ ನೆರೆಯ

ಮಹಾರಾಷ್ಟ್ರದಲ್ಲಿ ಬೆಳೆಯುವ ಪ್ರಸಿದ್ಧ ರತ್ನಾಗಿರಿ ಆಪುಸ್ ಸೇರಿದಂತೆ ಅನೇಕ ನಮೂನೆಯ ರಾಸಾಯನಿಕ ಮುಕ್ತ ಆರೋಗ್ಯಕರ ಮತ್ತು ರಚಿಕರವಾದ ಮಾವುಗಳು ಮೇಳದಲ್ಲಿ ಇಡಲಾಗಿದೆ. ಮಧ್ಯವರ್ತಿಗಳ ಹಾವಳಿ ತಪ್ಪಿಸಿ ರೈತರಿಂದ ನೇರವಾಗಿ ಗ್ರಾಹಕರಿಗೆ ಕಡಿಮೆ ಬೆಲೆಯಲ್ಲಿ ದೊರೆಯುವಂತೆ ಅವಕಾಶ ಕಲ್ಪಿಸಲಾಗಿದೆ. ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ಹಕ ಅಧಿಕಾರಿ ರಾಹುಲ್ ಶಿಂಧೆ, ಮತದಾನಕ್ಕೆ "ಬೆಳಗಾವಿ ಮಾವನ್ನು ಪ್ರಸಿದ್ಧಪಡಿಸುವ ಜೊತೆಗೆ ಅದರ ಮಾರಾಟ ವ್ಯಾಪ್ತಿಯನ್ನು ವಿಸ್ತರಿಸುವ ನಿಟ್ಟಿನಲ್ಲಿ ಈ ತಳಿಗೆ ಪ್ರದರ್ಶನದಲ್ಲಿ ವಿಶೇಷ ಆದ್ಯತೆ ನೀಡಲಾಗಿದೆ. ಮೇಳದಲ್ಲಿ ರೈತರಿಂದ ನೇರ ಮಾರಾಟಕ್ಕೆ ಅವಕಾಶ ಕಲ್ಪಿಸಲಾಗಿದೆ" ಎಂದು ತಿಳಿಸಿದ್ದಾರೆ.

**ಬೈಟ್: ರಾಹುಲ್ ಶಿಂಧೆ:**

**<><*<><>*><>**

ಎಸ್‌ಎಸ್‌ಎಲ್‌ಸಿಯಲ್ಲಿ ಪ್ರಥಮ ಸ್ಥಾನಪಡೆದ ಮೈಸೂರಿನ ಮೊರಾರ್ಜಿ ದೇಸಾಯಿ ವಸತಿ ಶಾಲೆಯ ವಿದ್ಯಾರ್ಥಿನಿ ಅಂಕಿತಾ ಬಸಪ್ಪ ಕೊನ್ನೂರು ಅವರನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅಭಿನಂದಿಸಿದ್ದಾರೆ. ಮೈಸೂರಿನಲ್ಲಿಂದು ಅವರು ಸುದ್ದಿಗಾರರೊಂದಿಗೆ ಮಾತನಾಡುತ್ತಾ, ಅಂಕಿತಾಳ ಸಾಧನೆಗೆ ಹರ್ಷ ವ್ಯಕ್ತಪಡಿಸಿ, ಸರ್ಕಾರಿ ವಸತಿ ಶಾಲೆಯ ಹೆಚ್ಚಿನ ಸಂಖ್ಯೆಯ ಮಕ್ಕಳು ರ್‍ಯಾಂಕ್ ಪಡೆದು ಅತ್ಯುನ್ನತ ಶ್ರೇಣಿಯಲ್ಲಿ ಉತ್ತೀರ್ಣರಾಗಬೇಕು. ಶೈಕ್ಷಣಿಕ ರಂಗದಲ್ಲಿ ಈ ವಿದ್ಯಾರ್ಥಿಗಳು ರಾಜ್ಯಕ್ಕೆ ಮಾದರಿಯಾಗಬೇಕು ಎಂದು ಹೇಳಿದರು.

**<><*<><>*><>**

ಚುನಾವಣಾ ಆಯೋಗದ ವಿಶ್ವಾಸಾರ್ಹತೆ ಮತ್ತು ಮತದಾನ ಪ್ರಮಾಣ ದಾಖಲೆ ಬಿಡುಗಡೆ ವಿಳಂಬ ವಿಚಾರದಲ್ಲಿ ಕಾಂಗ್ರೆಸ್ ರಾಷ್ಟ್ರೀಯ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು, ಬರೆದ ಪತ್ರಕ್ಕೆ ಭಾರತೀಯ ಚುನಾವಣಾ ಆಯೋಗ ಉತ್ತರವನ್ನು ನೀಡಿದೆ. ಮತದಾನ ಪೂರ್ಣವಾದ ನಂತರ ಶೇಕಡವಾರು ಮತದಾನದ ಮಾಹಿತಿಯನ್ನು ಪ್ರತಿಯೋರ್ವ ಅಭ್ಯರ್ಥಿ ಮತ್ತು ರಾಜಕೀಯ ಪಕ್ಷಕ್ಕೆ ತಕ್ಷಣವೇ ಹಸ್ತಾಂತರಿಸುವ ಕಾರಣ ಈ ದಾಖಲಾತಿಯಲ್ಲಿ ಯಾವುದೇ ಮಾರ್ಪಾಡನ್ನು ನಂತರದ ಅವಧಿಯಲ್ಲಿ ಮಾಡಲು ಸಾಧ್ಯವಿಲ್ಲ ಎಂದು ಸ್ಪಷ್ಟಪಡಿಸಿದೆ. ಆಯೋಗದ ವೋಟರ್ಸ್ ಟರ್ನೌಟ್ ಮೊಬೈಲ್ ಆಪ್‌ನಲ್ಲೂ ಮತದಾನ ಪ್ರಮಾಣದ ಮಾಹಿತಿ ಲಭ್ಯವಿರುತ್ತದೆ ಎಂದು ತಿಳಿಸಿದೆ. ಚುನಾವಣಾ ಪ್ರಕ್ರಿಯೆಯಲ್ಲಿ ಸಂಪೂರ್ಣ ಪಾರದರ್ಶಕತೆಯನ್ನು ಅನುಸರಿಸಲಾಗಿದ್ದು, ಎಲ್ಲ ಮಾಹಿತಿಯು ಸಾರ್ವಜನಿಕವಾಗಿದೆ ಎಂದು ಆಯೋಗ ತಿಳಿಸಿದೆ. ಚುನಾವಣಾ ಅವ್ಯವಸ್ಥೆ ಎಂಬ ಖರ್ಗೆಯವರ ಟೀಕೆಯನ್ನು ಅಲ್ಲಗಳೆದಿರುವ ಆಯೋಗ, ಅವರ ಹೇಳಿಕೆಗಳು ಗೊಂದಲಕ್ಕೆ

ಎಡೆಮಾಡಿಕೊಟ್ಟಿದ್ದು ವಸ್ತು ನಿಷ್ಠವಾಗಿಲ್ಲ ಎಂದು ಆರೋಪಿಸಿದೆ. ಇಂತಹ ಹೇಳಿಕೆಗಳನ್ನು ನೀಡದೆ ಖರ್ಗೆ ಅವರು ಸಮ್ಯಮ ಕಾಯ್ದುಕೊಳ್ಳುವಂತೆ ಸಲಹೆ ನೀಡಿದೆ.

**<><*<><>*><>**

ದೇಸಿಯ ಬಿತ್ತನೆ ಬೀಜಗಳ ವೈವಿಧ್ಯದ ಬಗ್ಗೆ ಜನರಲ್ಲಿ ಅರಿವು ಮೂಡಿಸುವ ಉದ್ದೇಶದಿಂದ ಇದೇ ೧೨ರಂದು ದಾವಣಗೆರೆ ಕೃಷಿ ವಿಜ್ಞಾನ ಕೇಂದ್ರದ ಆವರಣದಲ್ಲಿ 'ಪಾರಂಪರಿಕ ಬೀಜೋತ್ಸವ' ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಕೃಷಿ ವಿಜ್ಞಾನ ಕೇಂದ್ರದ ಮುಖ್ಯಸ್ಥ ಡಾ.ದೇವರಾಜ್ ಹೇಳಿದ್ದಾರೆ. ಒಂದು ದಿನದ ಈ ಉತ್ಸವದಲ್ಲಿ ದೇಶದ ವಿವಿಧ ಭಾಗಗಳಿಂದ ೩೦ಕ್ಕೂ ಹೆಚ್ಚಿನ ಬೀಜ ಸಂರಕ್ಷಕರ ತಂಡಗಳು ಪಾಲ್ಗೊಳ್ಳಲಿವೆ. ವಿವಿಧ ದೇಸಿ ತಳಿಗಳನ್ನು ಪ್ರದರ್ಶಿಸಲಾಗುತ್ತಿದ್ದು, ಒಂದು ಸಾವಿರಕ್ಕೂ ಹೆಚ್ಚಿನ ದೇಸಿ ಧಾನ್ಯ, ತರಕಾರಿ, ಕಾಳು, ಗೆಡ್ಡೆ ಗೆಣಸು, ಸೊಪ್ಪು ಮತ್ತು ಹಣ್ಣಿನ ತಳಿಗಳು ಪ್ರದರ್ಶನಗೊಳ್ಳಲಿವೆ. ಗುಣಮಟ್ಟದ ಭತ್ತ, ಸಿರಿಧಾನ್ಯ ಮತ್ತು ತರಕಾರಿ ಬೀಜಗಳು ಮಾರಾಟಕ್ಕೆ ಸಿಗಲಿವೆ. ಕೆಂಪು ಬಣ್ಣದ 'ಸಿದ್ಧ ಹಲಸು' ಮತ್ತು ಇತರೆ ಹಣ್ಣಿನ ಗಿಡಗಳು ಮಾರಾಟಕ್ಕೆ ಲಭ್ಯವಿರುತ್ತವೆ. ರೈತ ವಿಜ್ಞಾನಿಗಳು ಅಭಿವೃದ್ಧಿಪಡಿಸಿದ ಭತ್ತದ ತಳಿಗಳ ಮಾರಾಟಕ್ಕೆ ವ್ಯವಸ್ಥೆ ಕಲ್ಪಿಸಲಾಗಿದೆ ಎಂದು ಹೇಳಿದರು. ಅಂದು ಬೆಳಿಗ್ಗೆ ೯ ಗಂಟೆಯಿಂದ ಸಂಜೆ ೬ ಗಂಟೆವರೆಗೆ ನಡೆಯುವ ಕಾರ್ಯಕ್ರಮವನ್ನು ರಾಜ್ಯೋತ್ಸವ ಪ್ರಶಸ್ತಿ ವಿಜೇತೆ ಕೋಲಾರದ ಬೀಜಮಾತೆ ಪಾಪಮ್ಮ ಮತ್ತು ಮೈಸೂರಿನ ಬೀಜಮಾತೆ ಪದ್ಮಾವತಮ್ಮ ಉದ್ಘಾಟಿಸಲಿದ್ದಾರೆ ಎಂದು ತಿಳಿಸಿದರು.

**<><*<><>*><>**

ಪ್ರತಿಯೊಬ್ಬರೂ ಸ್ವಚ್ಚತೆಯ ಪ್ರಜ್ಞೆ ಹೊಂದಿರುವುದು ಅವಶ್ಯಕ ಎಂದು ಕೊಪ್ಪಳ ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ರತ್ನಂ ಪಾಂಡೆಯ ಅವರು ಹೇಳಿದ್ದಾರೆ. ಕೊಪ್ಪಳ ತಾಲೂಕಿನ ಹಾಲವರ್ತಿ ಗ್ರಾಮ ಪಂಚಾಯತಿಯ ಬೆಳವಿನಾಳ ಗ್ರಾಮದಲ್ಲಿ ಸ್ವಚ್ಛ ಭಾರತ ಮಿಷನ್ ಯೋಜನೆಯಡಿ ಹಮ್ಮಿಕೊಂಡಿದ್ದ ಸ್ವಚ್ಛತಾ ಶ್ರಮದಾನದಲ್ಲಿ ಭಾಗವಹಿಸಿ ಅವರು ಮಾತನಾಡಿದರು. ಈಗಾಗಲೇ ಗ್ರಾಮದಲ್ಲಿ ಮಹಾತ್ಮಾ ಗಾಂಧಿ ನರೇಗಾ ಯೋಜನೆಯಡಿ ಎಲ್ಲಾ ಕುಟುಂಬಗಳಿಗೆ ಇಂಗು ಗುಂಡಿ ನಿರ್ಮಿಸಲಾಗಿದೆ. ಸ್ವಚ್ಛ ಭಾರತ ಮಿಷನ್ ಯೋಜನೆಯಡಿ  ಪ್ರತಿ ಮನೆಗೆ ಒಣ ತ್ಯಾಜ್ಯಗಳಾದ ಪ್ಲಾಸ್ಟಿಕ್, ಪೇಪರ್, ಒಣಕಸ ಸಂಗ್ರಹಿಸಲು ಮನೆಯ ಮುಂದೆ ಕಂಬಕ್ಕೆ ಹಾಕಲು ಬಿದಿರಿನ ಬುಟ್ಟಿಗಳನ್ನು ವಿತರಿಸಲಾಗಿದೆ. ೨೦೨೨-೨೩ನೇ ಸಾಲಿನಲ್ಲಿ ಮಹಾತ್ಮಾ ಗಾಂಧಿ ನರೇಗಾ ಯೋಜನೆಯಡಿ ಸಮುದಾಯ ಇಂಗು ಗುಂಡಿ ನಿರ್ಮಿಸಿ ರಾಜ್ಯಕ್ಕೆ ಮಾದರಿಯಾಗಿದೆ ಎಂದು ತಿಳಿಸಿದ್ದಾರೆ.

<><*<><>*><>

ಬೆಂಗಳೂರು ಪದವೀಧರರ ಕ್ಷೇತ್ರ ಹಾಗೂ ಆಗ್ನೇಯ ಶಿಕ್ಷಕರ ಕ್ಷೇತ್ರದಿಂದ ರಾಜ್ಯ ವಿಧಾನ ಪರಿಷತ್ತಿಗೆ ನಡೆಯಲಿರುವ ಚುನಾವಣೆಗೆ ಸಂಬಂಧಿಸಿದಂತೆ ಜೂನ್ ೦೩ ರಂದು ನಡೆಯಲಿರುವ ಮತದಾನದ ದಿನದಂದು ಮತದಾರರ ಬಲಗೈನ ತೋರುಬೆರಳಿಗೆ ಅಳಿಸಲಾಗದ ಶಾಯಿ ಹಚ್ಚಲಾಗುವುದು ಎಂದು ಭಾರತ ಚುನಾವಣಾ ಆಯೋಗ ತಿಳಿಸಿದೆ. ಇತ್ತೀಚೆಗೆ ರಾಜ್ಯದಲ್ಲಿ ನಡೆದ ಎರಡು ಹಂತಗಳ ಲೋಕಸಭಾ ಚುನಾವಣೆಯಲ್ಲಿ ಪಾಲ್ಗೊಂಡ ಮತದಾರರಿಗೆ ಎಡಗೈ ತೋರು ಬೆರಳಿಗೆ ಅಳಿಸಲಾಗದ ಶಾಯಿ ಹಚ್ಚಲಾಗಿತ್ತು. ಈ ಹಿನ್ನೆಲೆ ಚುನಾವಣಾ ಆಯೋಗ ಈ ನಿರ್ಧಾರ ಕೈಗೊಂಡಿದೆ.

<><*<><>*><>

ಇನ್ನು ಹವಾವರ್ತಾಮಾನ...

ದಕ್ಷಿಣ ಒಳನಾಡಿನ ಕೆಲವು ಕಡೆಗಳಲ್ಲಿ ಹಾಗೂ ಉತ್ತರ ಒಳನಾಡಿಕ ಒಂದೆರೆಡು ಕಡೆಗಳಲ್ಲಿ ಮಳೆಯಾಗಿದೆ. ಕರಾವಳಿಯಲ್ಲಿ ಒಣಹವೆ ಇತ್ತು.

ಬೆಂಗಳೂರು ನಗರದಲ್ಲಿ ಗರಿಷ್ಠ ಮಳೆಯ ಪ್ರಮಾಣ ೭ ಸೆಂಟಿಮೀಟರ್ ದಾಖಲಾಗಿದೆ. ಮೈಸೂರು ಜಿಲ್ಲೆಯ ಹುಣಸೂರಿನಲ್ಲಿ ೫, ಗದಗ ಜಿಲ್ಲೆಯ ಬೆಳ್ಳಟ್ಟಿ, ಕೊಡುಗು ಕುಶಾಲ್ ನಗರ, ರಾಮನಗರ ಜಿಲ್ಲೆಯ ಮಾಗಡಿ ಹಾಗೂ ತುಮಕೂರು ಜಿಲ್ಲೆಯ ಬರಗೂರಿನಲ್ಲಿ ತಲಾ ೪ ಸೆಂಟಿಮೀಟರ್ ಮಳೆಯಾಗಿದೆ ಎಂದು ಭಾರತೀಯ ಹವಾಮಾನ ಇಲಾಖೆ ತಿಳಿಸಿದೆ.

ಉಳಿದಂತೆ ಕೊಡಗು, ಮೈಸೂರು, ಹಾಸನ, ಚಿತ್ರದುರ್ಗ, ಯಾದಗರಿ, ಬೆಂಗಳೂರು ನಗರ, ರಾಮನಗರ, ದಾವಣಗೆರೆ ಹಾಗೂ ಚಿಕ್ಕಮಗಳೂರು ಜಿಲ್ಲೆಗಳ ಹಲವೆಡೆ ಮಳೆಯಾಗಿದೆ.

ರಾಜ್ಯದಲ್ಲಿ ಅತಿ ಗರಿಷ್ಠ ತಾಪಮಾನ ೪೦.೭ ಡಿಗ್ರಿ ಸೆಲ್ಸಿಯಸ್ ಬಾಗಲಕೋಟೆಯಲ್ಲಿ ದಾಖಲಾಗಿದೆ. ಮುಂದಿನ ಐದು ದಿನಗಳಲ್ಲಿ ರಾಜ್ಯಾದ್ಯಂತ ಗರಿಷ್ಠ ತಾಪಮಾನ ೨ ರಿಂದ ೪ ಡಿಗ್ರಿ ಸೆಲ್ಸಿಯಸ್ ಇಳಿಕೆಯಾಗಲಿದೆ ಎಂದು ಇಲಾಖೆ ತಿಳಿಸಿದೆ.

ಮುಂದಿನ ೨೪ ಗಂಟೆಗಳಲ್ಲಿ ಬೆಂಗಳೂರು ಮತ್ತು ಸುತ್ತಮುತ್ತ ಸಾಮಾನ್ಯವಾಗಿ ಮೋಡಕವಿದ ವಾತಾವರಣವಿರಲಿದ್ದು, ಕೆಲವು ಕಡೆಗಳಲ್ಲಿ ಸಂಜೆ ಅಥವಾ ರಾತ್ರಿ ವೇಳೆ ಹಗುರದಿಂದ ಸಾಧಾರಣ ಗುಡುಗು ಸಹಿತ ಮಳೆಯಾಗುವ ಸಾಧ್ಯತೆಯಿದೆ.  ಗರಿಷ್ಠ ತಾಪಮಾನ ೩೨, ಕನಿಷ್ಠ ತಾಪಮಾನ ೨೧ ಡಿಗ್ರಿ ಸೆಲ್ಸಿಯಸ್ ದಾಖಲಾಗುವ ಸಂಭವವಿದೆ.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>